ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1156 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಕಾಂತರಾಜ್ |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 20.12.2018 |
| ಪ್ರಶ್ನೆ | | ಉತ್ತರ |
| (ಅ) | ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; | ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ 19 ಸರ್ಕಾರಿ ಹಾಗೂ 16 ಖಾಸಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. |
| (ಆ) | ಈ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿನ 19 ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ವಿವರ ಈ ಕೆಳಕಂಡಂತಿದೆ. |

| ಕ್ರ ಸಂ. | ವಿಶ್ವವಿದ್ಯಾಲಯದ ಹೆಸರು | ಖಾಲಿ ಇರುವ ಹುದ್ದೆಗಳ ಸಂಖ್ಯೆ | |
|---|---|---|---|
| | | ಬೋಧಕ | ಬೋಧಕೇತರ |
| 1 | ಬೆಂಗಳೂರು ವಿಶ್ವವಿದ್ಯಾಲಯ | 345 | 891 |
| 2 | ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, | | |
| 3 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, | | |
| 2 | ಮೈಸೂರು ವಿಶ್ವವಿದ್ಯಾಲಯ | 327 | 720 |
| 3 | ಕರ್ನಾಟಕ ವಿಶ್ವವಿದ್ಯಾಲಯ | 293 | 859 |
| 4 | ಕುವೆಂಪು ವಿಶ್ವವಿದ್ಯಾಲಯ | 34 | 255 |
| 5 | ಗುಲ್ಬರ್ಗ ವಿಶ್ವವಿದ್ಯಾಲಯ | 175 | 441 |
| 6 | ಮಂಗಳೂರು ವಿಶ್ವವಿದ್ಯಾಲಯ | 76 | 245 |
| 7 | ತುಮಕೂರು ವಿಶ್ವವಿದ್ಯಾಲಯ | 78 | 167 |
| 8 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 60 | 166 |
| 9 | ದಾವಣಗೆರೆ ವಿಶ್ವವಿದ್ಯಾಲಯ. | 138 | 146 |
| 10 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ | 84 | 95 |
| 11 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ | 30 | 139 |
| 12 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 32 | 25 |
| 13 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | 15 | 19 |
| 14 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 21 | 35 |
| 15 | ಕನ್ನಡ ವಿಶ್ವವಿದ್ಯಾಲಯ | 13 | 27 |
| 16 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 56 | 359 |
| 17 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 79 | 193 |
| | ಒಟ್ಟು | **1856** | **4780** |

| | | |
|---|---|---|
| (ಇ) | ಈ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವುದನ್ನು ಸರ್ಕಾರ ತಡೆ ಹಿಡಿದಿದೆಯೇ; ಹಾಗಿದ್ದಲ್ಲಿ ಕಾರಣಗಳೇನು; (ವಿವರ ನೀಡುವುದು) | ಹೌದು<br>ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ವಿಶ್ವವಿದ್ಯಾಲಯಗಳ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವಾಗ ಅನುಸರಿಸಬೇಕಾದ ಮಾನದಂಡಗಳ ಕುರಿತು ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್‌ಇ 2017 ದಿನಾಂಕ:17.07.2017ರಲ್ಲಿ ಸೂಚನೆಗಳನ್ನು ನೀಡಲಾಗಿತ್ತು. ಸದರಿ ಸುತ್ತೋಲೆಯಲ್ಲಿ ಸೂಚಿಸಿದ ಮಾನದಂಡಗಳು ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ UGC Regulations (Minimum Qualifications for Appoinment of Teachers and other academic Staff in Universities and colleges and measures for the maintainece of standards in Higer Education) 2010 ರಲ್ಲಿ ಗೊತ್ತುಪಡಿಸಲಾಗಿರುವ ಅವಕಾಶಗಳು, ಅಗತ್ಯತೆಗಳು ಮತ್ತು ಮಾನದಂಡಗಳಿಗೆ ವ್ಯತಿರಿಕ್ತವಾಗಿದ್ದ ಕಾರಣ, ಬೋಧಕ ಹುದ್ದೆಗಳ ನೇಮಕಾತಿ ವಿಧಾನದ ಸಮಗ್ರ ಪರಿಶೀಲನೆ ಮತ್ತು ಪುನರಾವಲೋಕನ ಅಗತ್ಯವೆಂದು ಕಂಡುಬಂದ ಹಿನ್ನೆಲೆಯಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್‌ಇ 2017 ದಿನಾಂಕ:17.07.2017ನ್ನು ತಕ್ಷಣ ಹಿಂಪಡೆಯಲು ಹಾಗೂ ಸದರಿ ಸುತ್ತೋಲೆಯನ್ನು ಅನುಸರಿಸಿ ವಿಶ್ವವಿದ್ಯಾಲಯಗಳಲ್ಲಿ ಆರಂಭಿಸಲಾಗಿದ್ದ ನೇಮಕಾತಿಗಳನ್ನು ಕೂಡಲೇ ಸ್ಥಗಿತಗೊಳಿಸಲು ಇಡಿ 136 ಯುಎನ್‌ಇ 2017 ದಿನಾಂಕ:05.11.2018ರ ಸುತ್ತೋಲೆಯಲ್ಲಿ ಸೂಚಿಸಲಾಗಿರುತ್ತದೆ. |
| (ಈ) | ತಡೆಯನ್ನು ತೆರವುಗೊಳಿಸಿ, ಆಯಾ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುವು ಮಾಡಿಕೊಡುವುದೇ? | ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ ಮಾರ್ಗಸೂಚಿಗಳನುಸಾರ ವಿಶ್ವವಿದ್ಯಾಲಯಗಳ ಬೋಧಕ ಹುದ್ದೆಗಳನ್ನು ಭರ್ತಿಮಾಡಿಕೊಳ್ಳುವುದಕ್ಕಾಗಿ, ನಿಯಮಗಳನ್ನು ರೂಪಿಸಲು ಸರ್ಕಾರದ ಹಂತದಲ್ಲಿ ಕ್ರಮಕೈಗೊಳ್ಳಲಾಗುತ್ತಿದ್ದು, ತದನಂತರ ವಿಶ್ವವಿದ್ಯಾಲಯಗಳ ಬೋಧಕ ಹುದ್ದೆಗಳನ್ನು ಮತ್ತು ಕರ್ನಾಟಕ ನಾಗರಿಕ ಸೇವಾ ( ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿದ ನಿಯಮಗಳನ್ವಯ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದಿಂದ ನಿಯಮಾನುಸಾರ ಅನುಮತಿ ನೀಡಲಾಗುವುದು. |

ಸಂಖ್ಯೆ: ಇಡಿ 424 ಯುಎನ್‌ಇ 2018

(ಜಿ.ಟಿ.ದೇವೇಗೌಡ)

ಉನ್ನತ ಶಿಕ್ಷಣ ಸಚಿವರು.